## 103. ಮಕ್ಕಳ ಸ್ನೇಹಿ ಶಾಲಾ ಪರಿಸರ ನಿರ್ಮಿಸಿ

ಶಿಕ್ಷಕರು ಕಳಂಕ ರಹಿತವಾಗಿ ಸಮಾನತೆ, ಸಹೋದರತೆ, ಸಹಬಾಳ್ವೆ ಹಾಗೂ ಸಾಮಾಜಿಕ ನ್ಯಾಯವನ್ನು ಅಳವಡಿಸಿಕೊಂಡು ಮಕ್ಕಳ ಸ್ನೇಹಿ ಶಾಲಾ ಪರಿಸರ ನಿರ್ಮಿಸಬೇಕು ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಶಾಲಾ ಶಿಕ್ಷಕರಿಗೆ ಹೇಳಿದ್ದಾರೆ.

ಸಂವಿಧಾನದ ಶ್ರೇಷ್ಠ ಮೌಲ್ಯಗಳಾದ ಸಮಾನತೆ, ಸಹೋದರತ್ವ, ಸಹಬಾಳ್ವೆ, ಸಾಮಾಜಿಕ ನ್ಯಾಯಗಳನ್ನು ಶಿಕ್ಷಕರು ಅಳವಡಿಸಿಕೊಂಡು ವಿದ್ಯಾರ್ಥಿಗಳಲ್ಲೂ ಇಂತಹ ಮೌಲ್ಯಗಳನ್ನು ಬೆಳೆಸಲು ಶ್ರಮಿಸಬೇಕು ಎಂದಿದ್ದಾರೆ. ಸಮಾಜದ ಅಭಿವೃದ್ಧಿ ಶಿಕ್ಷಣದ ಜೊತೆಗೆ ಬೆಳೆದುಕೊಂಡಿದೆ. ಸಮಾಜದಲ್ಲಿ ತಂದೆ ಹಾಗೂ ತಾಯಿ ನಂತರದ ಸ್ಥಾನ ಗುರುವಿಗೆ ಮೀಸಲಾಗಿದೆ. ವ್ಯಕ್ತಿಯ ಸರ್ವತೋಮುಖ ಅಭಿವೃದ್ಧಿಗೆ ಶಿಕ್ಷಕರ ಪಾತ್ರ ಮುಖ್ಯವಾಗಿದೆ. ಮೌಲ್ಯಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಮಕ್ಕಳಲ್ಲಿ ಅದನ್ನು ಬೆಳೆಸಬೇಕು ಎಂದು ಹೇಳಿದ್ದಾರೆ.

ಶಿಕ್ಷಣವನ್ನು ನೀಡುವ ಗುರುವಿಗೆ ಸಮಾಜದ ಎಲ್ಲ ವರ್ಗಗಳು ಗೌರವ ನೀಡುತ್ತವೆ. ಮಾಜಿ ರಾಷ್ಟ್ರಪತಿ ಎಸ್. ರಾಧಾಕೃಷ್ಣನ್ ಅವರು ಒಬ್ಬ ಶ್ರೇಷ್ಠ ದಾರ್ಶನಿಕರಾಗಿ, ಆದರ್ಶ ಶಿಕ್ಷಕರಾಗಿ ಸೇವೆ ಸಲ್ಲಿಸುವ ಹಂತದಲ್ಲೇ ಉಪ ರಾಷ್ಟ್ರಪತಿ, ನಂತರ ರಾಷ್ಟ್ರಪತಿ ಹುದ್ದೆ ಅಲಂಕರಿಸಿದ್ದರು. ಆ ಮೂಲಕ ಶಿಕ್ಷಕ ಹುದ್ದೆಯ ಸಾಧ್ಯತೆಗಳನ್ನು ಜಗತ್ತಿಗೆ ತೆರೆದಿಟ್ಟಿದ್ದರು. ಶಿಕ್ಷಕ ಸ್ಥಾನಕ್ಕೆ ಇರುವ ಶ್ರೇಷ್ಠತೆ ಬೇರ್‍ಯಾವ ಸ್ಥಾನಕ್ಕೂ ಸಿಗದು ಎಂದು ಹೇಳಿದ್ದಾರೆ. ಶಿಕ್ಷಣ ಇಲಾಖೆಯಲ್ಲಿ ಆಗಿರುವ ಅನೇಕ ಸುಧಾರಣೆಗಳಿಂದ ಇತ್ತೀಚೆಗೆ ಮಕ್ಕಳು ಖಾಸಗಿ ಶಾಲೆಗಳಿಂದ ಸರ್ಕಾರಿ ಶಾಲೆಗಳತ್ತ ಮುಖ ಮಾಡುತ್ತಿದ್ದಾರೆ. ಸರ್ಕಾರಿ ಶಾಲೆ ಯಾವ ರೀತಿ ಅಭಿವೃದ್ಧಿಯಾಗುತ್ತಿದೆ ಎಂಬುದನ್ನು ಸಾಬೀತು ಮಾಡುತ್ತಿದೆ.

ಶಿಕ್ಷಕ ಸ್ನೇಹಿ ವರ್ಗಾವಣಾ ನೀತಿಯನ್ನು ಜಾರಿಗೆ ತಂದಿದ್ದು, ವರ್ಗಾವಣಾ ಪ್ರಕ್ರಿಯೆ ಜಾರಿಯಲ್ಲಿದೆ. ಕೊರೋನಾ ಹಿನ್ನೆಲೆಯಲ್ಲಿ, ಖಾಸಗಿ ಅನುದಾನ ರಹಿತ ಶಾಲೆಗಳ ಶಿಕ್ಷಕರಿಗೆ ಯಾವುದಾದರೂ ರೀತಿಯಲ್ಲಿ ಸಹಾಯ ಮಾಡಬೇಕೆಂದು ಸರ್ಕಾರದ ಚಿಂತನೆಯಾಗಿದೆ. ಮೊದಲ ಹಂತದಲ್ಲಿ ಶಿಕ್ಷಕರಿಗೆ ವೇತನ ದೊರೆಯುವಂತಾಗಲು ಖಾಸಗಿ ಶಾಲೆಗಳಲ್ಲಿ ದಾಖಲಾತಿ ಪ್ರಕ್ರಿಯೆಗೆ ಆದೇಶ ನೀಡಿದ್ದೇವೆ. ದಾಖಲಾತಿ ಮೂಲಕ ಸಂಗ್ರಹವಾದ ಹಣವನ್ನು ಶಿಕ್ಷಕರ ವೇತನಕ್ಕೆ ಬಳಸಿಕೊಳ್ಳಬೇಕೆಂದು ಸೂಚನೆ ನೀಡಲಾಗಿದೆ. ಎರಡನೇ ಹಂತದಲ್ಲಿ ಶಿಕ್ಷಕರಿಗೆ ಸರ್ಕಾರದಿಂದ ಯಾವ ರೀತಿಯ ಸಹಾಯ ನೀಡಬೇಕೆಂಬುದನ್ನು ಪರಿಶೀಲಿಸಲಾಗುತ್ತದೆ ಎಂದು ಸಚಿವ ಸುರೇಶ್ ಕುಮಾರ್ ಹೇಳಿದ್ದಾರೆ.

ಆಧಾರ:ಉದಯವಾಣಿ, ದಿನಾಂಕ:12.09.2020